ಕೇಂದ್ರ ರಸ್ತೆ ನಿಧಿಯಡಿಯಲ್ಲಿ

1.	ಕೀಲಿಕುಣಿ ಕೋತನಹಿಪ್ಪರ್ಗಾ ರಸ್ತೆ ಭಾಗ	50.00	40.00
2.	ಉಮರ್ಗಾ ಬಾರ್ಡರ ಮಹಾಗಾಂವ ಸುಲೇಪೇಟರಸ್ತೆ	24.00	24.00
3.	ಕೀಲಿಮಣಿ ಕೋತನ ಹಿಪ್ಪರ್ಗಾ ರಸ್ತೆ ಭಾಗ–2	50.00	32.00

....

150 (283) : ಶ್ರೀ ಶಿವಾನಂದ ನಾಯಕ್ (ಭಟ್ಕಳ) ಮಾನ್ಯ ಉಪ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಲೆನಾಡು ಅಭಿವೃದ್ಧಿ ಮಂಡಳಿವತಿಯಿಂದ ಈ ಹಿಂದೆ ಮಂಜೂರಾಗಿರುವ ಕಾಮಗಾರಿ ಪೈಕಿ ಪ್ರಾರಂಭಗೊಳ್ಳದ ರಸ್ತೆ ಅರ್ಧಕ್ಕೆ ನಿಂತಿರುವ ಕಾಮಗಾರಿಗಳಾವುವು (ವಿವರ ನೀಡುವುದು)

ಆ) ಬಾಕೀ ಕಾಮಗಾರಿಗಳು ಪ್ರಾರಂಭವಾಗದಿರಲು ಹಾಗೂ ಅರ್ಧಕ್ಕೆ ನಿಲ್ಲಲು ಕಾರಣವೇನು?

ಇ) ಈ ಕಾಮಗಾರಿಗಳಿಗೆ ಮಂಜೂರಾಗಿದ್ದ ಹಣ ಎಷ್ಟು;

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯ ಮಂತ್ರಿಗಳು)

ಅ) 31–3–2004ರ ಅಂತ್ಯಕ್ಕೆ ಮಂಡಳಿಯ ವತಿಯಿಂದ ರಸ್ತೆ ಕಾಮಗಾರಿಗಳ ವಿವರ ಈ ಕೆಳಕಂಡಂತಿದೆ

ಪೂರ್ಣಗೊಂಡ ಸಂಖ್ಯೆ:	650
ಪ್ರಗತಿಯಲ್ಲಿರುವ ಸಂಖ್ಯೆ:	486
ಪ್ರಾರಂಭ ಮಾಡಬೇಕಾಗಿರುವ ಕಾಮಗಾರಿಗಳ ಸಂಖ್ಯೆ:	218
ಒಟ್ಟು	1354

ಆ) ಹಿಂದಿನ ಎರಡು ಸಾಲುಗಳಲ್ಲಿ ಮಂಡಳಿಗೆ ಬಿಡುಗಡೆ ಮಾಡಿದ ಹಣವನ್ನು ಸಂಪೂರ್ಣವಾಗಿ ನಬಾರ್ಡ್ ಕಾಮಗಾರಿಗಳಿಗೆ ಖರ್ಚುಮಾಡಿರುವುದರಿಮದ ಮಂಡಳಿಯ ಮುಂದುವರೆದ ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ಹಾಗೂ ಹೊಸ ಕಾಮಗಾರಿಗಳನ್ನು ತೆಗೆದುಕೊಳ್ಳಲು ಸಾಧ್ಯವಾಗಲಿಲ್ಲ.

ಇ) ಅಪೂರ್ಣಗೊಂಡ ಕಾಮಗಾರಿಗಳನ್ನು ಮುಗಿಸಲು 7.61 ಕೋಟಿ ರೂ.ಗಳು ಹಾಗೂ ಹೊಸ ಕಾಮಗಾರಿಗಳಿಗೆ 4.36 ಕೋಟಿ ರೂ.ಗಳು ಬೇಕಾಗಿರುತ್ತದೆ. ಸಂಪನ್ಮೂಲಗಳನ್ನಾಧರಿಸಿ, ಈ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗುವುದು.

....

151 (310) : ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಈ ಹಿಂದೆ ಗ್ರಾಮಾಂತರ ಪ್ರದೇಶದಲ್ಲಿ ಓಡಿಸುತ್ತಿದ್ದ ಬಹುತೇಕ ಬಸ್ ಮಾರ್ಗಗಳನ್ನು ಸ್ಥಗಿತಗೊಳಿಸಿದ್ದರಿಂದ ಅಲ್ಲಿನ ಜನತೆ ಸಾರಿಗೆ ಸೌಲಭ್ಯವಿಲ್ಲದೆ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಗ್ರಾಮಾಂತರ ಪ್ರದೇಶಗಳಲ್ಲಿ ಬಸ್ಸುಗಳನ್ನು ಓಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

....

152 (311) : ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) ಮಾನ್ಯ ಲೋಕೋಪಯೋಗಿ ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ, ರಾಜ್ಯ ಹೆದ್ದಾರಿಗಳು, ಜಿಲ್ಲೆಗಳ ಪ್ರಮುಖರಸ್ತೆಗಳು ಹಾಗೂ ಗ್ರಾಮೀಣ ರಸ್ತೆಗಳು ಹದಗೆಟ್ಟಿದ್ದು ಸಂಚಾರಕ್ಕೆ ಅಡಚಣೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಪ್ರಸಕ್ತ ಸಾಲಿನಲ್ಲಿ ರಸ್ತೆಗಳ ಅಭಿವೃದ್ಧಿ ಕೈಗೊಳ್ಳುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಸಚಿವರು)

ಅ) ಬಂದಿದೆ.

ಆ) ಇದೆ.

ಇ) 1. ಲೋಕೋಪಯೋಗಿ ಇಲಾಖೆಯ ರಸ್ತೆಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಮುಖ್ಯ ರಸ್ತೆಗಳ ಗುಂಡಿ ಮುಚ್ಚುವ ಕಾಮಗಾರಿಗಳಿಗೆ ಕಾರ್ಯಪಾಲಕ ಇಂಜಿನಿಯರುಗಳು ಟೆಂಡರ್‌ಗಳನ್ನು ಆಹ್ವಾನಿಸಲಾಗಿದ್ದು, ನಿಯಮಾನುಸಾರ ಮುಂದಿನ ಕ್ರಮಕ್ಕೆಗೊಂಡು ಗುಂಡಿಗಳನ್ನು ಮುಚ್ಚುವ ಕಾರ್ಯಕ್ರಮವನ್ನು ಸದ್ಯದಲ್ಲಿಯೇ ಪ್ರಾರಂಭಿಸಿ ರಸ್ತೆಗಳನ್ನು ದುರಸ್ತಿ ಮಾಡಲಾಗುವುದು.

2. ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವತಿಯಿಂದ ಮೂರು ವರ್ಷಗಳ ರಾಜ್ಯ ಹೆದ್ದಾರಿಯ ನಿರ್ವಹಣೆ ಯೋಜನೆಯಡಿಯಲ್ಲಿ ರಾಜ್ಯ ಹೆದ್ದಾರಿಗಳ ನಿರ್ವಹಣೆಯು ಏಪ್ರಿಲ್ 2001ರಂದು ಪ್ರಾರಂಭವಾಗಿದ್ದು, 2004ರಲ್ಲಿ ಮುಕ್ತಾಯಗೊಂಡಿದೆ.

ರಾಜ್ಯ ಹೆದ್ದಾರಿಗಳ ಮುಂದಿನ ನಿರ್ವಹಣೆಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ – II ಅಡಿಯಲ್ಲಿ ಸುಮಾರು 14,000 ಕಿಮೀ.ಗಳಷ್ಟು ಉದ್ದದ ರಾಜ್ಯ ಹೆದ್ದಾರಿಗಳನ್ನು ನಿರ್ವಹಿಸಲು ಮತ್ತು ಅಭಿವೃದ್ಧಿಪಡಿಸಲು ಯೋಜಿಸಿ ರಸ್ತೆಗಳ ಸಮೀಕ್ಷೆ ನಡೆಸಲು ಎಸ್.ಓ.ಎಸ್. ಅಧ್ಯಯನವು ಪ್ರಗತಿಯಲ್ಲಿದೆ.